# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೆರಡನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

## ಮಂಗಳವಾರ, ದಿನಾಂಕ:20ನೇ ಫೆಬ್ರವರಿ, 2024

## (ಸಮಯ: ಬೆಳಗ್ಗೆ: 10.30 ಗಂಟೆಗೆ)

* * *

## 01. ಸಭೆಯ ಮುಂದಿಡಲಾಗುವ ಕಾಗದ ಪತ್ರ

**ಕಾರ್ಯದರ್ಶಿಯವರು:**

ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ವಿಧೇಯಕ, 2024ನ್ನು ಸಭೆಯ ಮುಂದಿಡುವುದು

## 02. ಶಾಸನ ರಚನೆ

**ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ವಿಧೇಯಕ, 2024
**ಶ್ರೀ ತಂಗಡಗಿ ಸಂಗಪ್ಪ ಶಿವರಾಜ್ (ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 03. ವಿತ್ತೀಯ ಕಾರ್ಯಕಲಾಪ

2024–25ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ

## 04. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ

"2024ನೇ ಫೆಬ್ರವರಿ, 12ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:13.02.2024ರಂದು **ಶ್ರೀ ಯು.ಬಿ. ವೆಂಕಟೇಶ್** ರವರು ಸೂಚಿಸಿದ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ

ನಾಲ್ಕನೇ ದಿನ

## 05. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

ಆ) <u>**ತಡೆಹಿಡಿಯಲಾದ ಪ್ರಶ್ನೆ:**</u>

| | |
|---|---|
| 1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಶರವಣ ಟಿ.ಎ.** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 05(19) | ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು |
| 2ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಮುನಿರಾಜು ಗೌಡ ಪಿ.ಎಂ.** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 18(200) | ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

## 06. ಶೂನ್ಯವೇಳೆ ಪ್ರಸ್ತಾವಗಳು

## 07. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀ ಯು.ಬಿ. ವೆಂಕಟೇಶ್** ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿರ್ವಹಿಸಿರುವ ಕಾಮಗಾರಿಗಳಿಗೆ ಎರಡೆರಡು ಬಾರಿ ಬಿಲ್ ಪಾವತಿಯಾಗಿರುವುದರಿಂದ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಿರುವ ಕುರಿತು ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦2. **ಶ್ರೀ ಮಂಜುನಾಥ್ ಭಂಡಾರಿ** ಅವರು ಕಂಬಳ ಕ್ರೀಡೆಯನ್ನು ಕರ್ನಾಟಕ "ರಾಜ್ಯ ಕ್ರೀಡೆ ಅಥವಾ ನಾಡಾ ಕ್ರೀಡೆ" ಎಂದು ಘೋಷಿಸಿ ಅಗತ್ಯ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಯುವಜನ ಸೇವೆಗಳು, ಕ್ರೀಡೆಗಳು ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

.3..

೦3. **ಶ್ರೀಮತಿ ಹೇಮಲತಾ ನಾಯಕ್** ಅವರು ಕೊಪ್ಪಳ ಜಿಲ್ಲೆಯ ಕಿನ್ನಾಳ ಗ್ರಾಮದಲ್ಲಿ ಬೊಂಬೆ ತಯಾರಿಕೆಯಲ್ಲಿ ತೊಡಗಿಸಿಕೊಂಡಿರುವ ಕರಕುಶಲಕರ್ಮಿಗಳಿಗೆ ವಸತಿ ಯೋಜನೆಯ ಮೂಲಕ ಮಂಜೂರು ಮಾಡಲಾದ ವಸತಿಗಳಿಗೆ ಹಕ್ಕುಪತ್ರಗಳನ್ನು ವಿತರಿಸದಿರುವ ಕುರಿತು ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

೦4. **ಶ್ರೀಮತಿ ಉಮಾಶ್ರೀ** ಅವರು ಕರ್ನಾಟಕ ಟೆಲಿವಿಷನ್ ಅಸೋಸಿಯೇಷನ್ ಸಂಸ್ಥೆಯ ಕಾರ್ಯದರ್ಶಿಯವರು ಬೈಲಾ ಪ್ರಕಾರ ಕಲಾವಿದರಿಗೆ ಸದಸ್ಯತ್ವವನ್ನು ನೀಡದೆ ಕಲಾವಿದರೇತರರಿಗೆ ಹೆಚ್ಚಿನ ಶುಲ್ಕ ವಿಧಿಸಿ ಸದಸ್ಯತ್ವವನ್ನು ನೀಡುತ್ತಿರುವುದಲ್ಲದೆ ಸರ್ಕಾರಕ್ಕೆ ಕಟ್ಟಬೇಕಾದ ತೆರಿಗೆ ಹಾಗೂ ಶುಲ್ಕವನ್ನು ಪಾವತಿಸದೆ ವಂಚಿಸುತ್ತಿರುವ ಕುರಿತು ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

## 08. ನಿಯಮ 330ರ ಮೇರೆಗೆ

೦1. **ಶ್ರೀಯುತರುಗಳಾದ ಬಿ.ಎಂ. ಫಾರೂಖ್, ಎಸ್.ಎಲ್. ಭೋಜೇಗೌಡ, ಶರವಣ ಟಿ.ಎ, ಕೆ.ಎ. ತಿಪ್ಪೇಸ್ವಾಮಿ, ಗೋವಿಂದರಾಜು ಹಾಗೂ ಸಿ.ಎನ್. ಮಂಜೇಗೌಡ** ಅವರುಗಳು ರಾಜ್ಯದ ಕೊಬ್ಬರಿ ಬೆಳೆಗಾರರಿಂದ ಹೆಚ್ಚುವರಿಯಾಗಿ ಒಂದು ಲಕ್ಷ ಮೆಟ್ರಿಕ್ ಟನ್ ಕೊಬ್ಬರಿ ಖರೀದಿಸುವಂತೆ ಕೇಂದ್ರಕ್ಕೆ ಒತ್ತಾಯಿಸುವುದರ ಜೊತೆಗೆ ಕೇಂದ್ರದ ಬೆಂಬಲ ಯೋಜನೆಯಡಿ ಕೊಬ್ಬರಿ ಖರೀದಿಗೆ ನೋಂದಣಿ ಅವಕಾಶ ವಿಸ್ತರಿಸುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀಯುತರುಗಳಾದ ಛಲವಾದಿ ಟಿ. ನಾರಾಯಣಸ್ವಾಮಿ ಹಾಗೂ ನಿರಾಣಿ ಹಣಮಂತ ರುದ್ರಪ್ಪ** ಅವರುಗಳು ಹಿಂದುಳಿದ ವರ್ಗಗಳ ವಸತಿ ಶಾಲೆ ಮತ್ತು ಹಾಸ್ಟೆಲ್‌ಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿಂದಾಗಿ ಕಲಿಕೆ ಮಾಡುತ್ತಿರುವ ಸಾವಿರಾರು ವಿದ್ಯಾರ್ಥಿಗಳು ಸಂಕಷ್ಟದಲ್ಲಿರುವ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀಯುತರುಗಳಾದ ಕೆ.ಎಸ್. ನವೀನ್, ಕೇಶವ ಪ್ರಸಾದ್ ಎಸ್, ಡಿ.ಎಸ್. ಅರುಣ್ ಹಾಗೂ ಹೆಚ್.ಎಸ್. ಗೋಪಿನಾಥ್** ಅವರುಗಳು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವಿವಿಧ ಮೂಲಗಳಿಂದ ಸಂಗ್ರಹವಾಗುವ ತೆರಿಗೆ ಹಾಗೂ ಆದಾಯ ಸೇರಿದಂತೆ ಬೆಂಗಳೂರಿನಲ್ಲಿ ಸಂಗ್ರಹವಾಗುವ ಜಿ.ಎಸ್.ಟಿ. ತೆರಿಗೆಯಲ್ಲಿನ ಖರ್ಚು/ವೆಚ್ಚಗಳ ಸಮಗ್ರ ಚಿತ್ರಣದ ಬಗ್ಗೆ ಶ್ವೇತಪತ್ರ ಹೊರಡಿಸುವ ಕುರಿತು ಪ್ರಸ್ತಾಪಿಸುವುದು.

೦4. **ಡಾ: ವೈ.ಎ. ನಾರಾಯಣಸ್ವಾಮಿ** ಅವರು ಬೆಂಗಳೂರು ಟರ್ಫ್ ಕ್ಲಬ್‌ನವರು ನೂರಾರು ಕೋಟಿ ರೂಪಾಯಿಗಳ ತೆರಿಗೆಯನ್ನು ಪಾವತಿಸದೆ ಸರ್ಕಾರಕ್ಕೆ ವಂಚಿಸಿರುವ ಕುರಿತು ಪ್ರಸ್ತಾಪಿಸುವುದು.

೦5. **ಶ್ರೀ ಸಿ.ಎನ್. ಮಂಜೇಗೌಡ** ಅವರು ಕೆ.ಪಿ.ಸಿ.ಎಲ್ ವ್ಯಾಪ್ತಿಯಲ್ಲಿ ಬರುವ ಹುಬ್ಬಳ್ಳಿ-ಧಾರವಾಡ ವಿದ್ಯುತ್ ಪ್ರಸರಣ ನಿಗಮವು ಟ್ರಾನ್ಸ್‌ಫಾರ್ಮರ್ (ವಿದ್ಯುತ್ ಪರಿವರ್ತಕಗಳು) ನಿರ್ಮಾಣ ಮಾಡಲು ಖಾಸಗಿಯವರಿಗೆ ಗುತ್ತಿಗೆ ನೀಡಿರುವ ಮಾದರಿಯಲ್ಲಿಯೇ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಟ್ರಾನ್ಸ್‌ಫಾರ್ಮರ್ ಅಳವಡಿಸಲು ಖಾಸಗಿಯವರಿಗೆ ಗುತ್ತಿಗೆ ನೀಡುವ ಕುರಿತು ಪ್ರಸ್ತಾಪಿಸುವುದು.

೦೬. **ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ** ಅವರು ವಿಧಾನಸೌಧ, ವಿಕಾಸಸೌಧ ಮತ್ತು ಶಾಸಕರ ಭವನದ ಆವರಣದಲ್ಲಿ ವಿಶ್ವಕರ್ಮ ಸಮಾಜದ ಭಗವಾನ್ ವಿಶ್ವಕರ್ಮ ಅಥವಾ ಅಮರಶಿಲ್ಪಿ ಜಕಣಾಚಾರಿ ಪ್ರತಿಮೆಯನ್ನು ಸ್ಥಾಪಿಸುವ ಕುರಿತು ಪ್ರಸ್ತಾಪಿಸುವುದು.

## 09. ಅರ್ಧ ಗಂಟೆ ಕಾಲಾವಧಿ ಚರ್ಚೆ

ಅ. ಎಲೆ ಚುಕ್ಕಿ ಮತ್ತು ಹಳದಿ ರೋಗ ಬಾಧೆಯಿಂದಾಗಿ ಅಡಿಕೆ ತೋಟಗಳು ಹಾನಿಗೊಳಗಾಗಿರುವ ಬಗ್ಗೆ ದಿನಾಂಕ:13.02.2024ರ ಚುಕ್ಕೆ ಗುರುತಿನ ಪ್ರಶ್ನೆ **ಸಂಖ್ಯೆ:03(25)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಆ. ಅಧ್ಯಕ್ಷ/ಉಪಾಧ್ಯಕ್ಷ ಮೀಸಲಾತಿ ಬಗ್ಗೆ ದಿನಾಂಕ:13.02.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:01(60)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

## ೧೦. ಸದಸ್ಯರ ಖಾಸಗಿ ಕಾರ್ಯಕಲಾಪಗಳು

### ಅ) ಖಾಸಗಿ ವಿಧೇಯಕ

**ಆಹಾರ ಸುರಕ್ಷತೆ ಮತ್ತು ಗುಣಮಟ್ಟಗಳ ಅಧಿನಿಯಮ (ತಿದ್ದುಪಡಿ) ವಿಧೇಯಕ, 2024**

ಅ) ಶ್ರೀ ಎನ್. ರವಿಕುಮಾರ್ ಅವರು "ಆಹಾರ ಸುರಕ್ಷತೆ ಮತ್ತು ಗುಣಮಟ್ಟಗಳ ಅಧಿನಿಯಮ (ತಿದ್ದುಪಡಿ) ವಿಧೇಯಕ"ವನ್ನು ಮಂಡಿಸಲು ಅನುಮತಿಯನ್ನು ಕೋರುವುದು.

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

### ಆ) ಖಾಸಗಿ ನಿರ್ಣಯ

ರಾಜ್ಯದಲ್ಲಿರುವ ರಾಜ್ಯ ಮತ್ತು ಕೇಂದ್ರ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಹಾಗೂ ಸರ್ಕಾರೇತರ ಸಂಸ್ಥೆಗಳಲ್ಲಿ "ಸಿ" ಮತ್ತು "ಡಿ" ದರ್ಜೆಯ ಹುದ್ದೆಗಳನ್ನು ಸ್ಥಳೀಯರಿಗೆ ಮೀಸಲಿಡುವ ಕುರಿತಂತೆ ಸಂವಿಧಾನಕ್ಕೆ ತಿದ್ದುಪಡಿ ತರುವ ಉದ್ದೇಶದ ಕುರಿತು **ಶ್ರೀ ಯು.ಬಿ. ವೆಂಕಟೇಶ್** ಅವರು ಮಂಡಿಸಿರುವ ನಿರ್ಣಯದ ಮೇಲೆ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**